ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 10 ಸಿ.ಎಂ.

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ  ದಿನಾಂಕ : DATE : 9/1/21

# ಸುಸ್ಥಿರ ಅಭಿವೃದ್ಧಿಗೆ 17 ಸೂತ್ರಗಳು!

## 2030ಕ್ಕೆ ಸುಸ್ಥಿರ ಅಭಿವೃದ್ಧಿ ಗುರಿ ಸಾಧಿಸಲು ಯೋಜನೆ

ಬೆಂಗಳೂರು: 2030ರೊಳಗೆ ರಾಜ್ಯದ ಪ್ರಗತಿ ಸಾಧಿಸುವ ಸಲುವಾಗಿ ಎಲ್ಲಾ 17 ರೀತಿಯ ಸುಸ್ಥಿರ ಗುರಿ ಸಾಧಿಸಲು ಸೂಕ್ತ ಕಾರ್ಯ ಯೋಜನೆ ರೂಪಿಸಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಪ್ರಥಮ ಯೋಜನಾ ಮಂಡಳಿ ಸಭೆಯಲ್ಲಿ ಮಾತನಾಡಿದ ಸಿಎಂ, 17 ಸುಸ್ಥಿರ ಅಭಿವೃದ್ಧಿಯಲ್ಲಿ ಕರ್ನಾಟಕ 100ಕ್ಕೆ 66 ಅಂಕಗಳೊಂದಿಗೆ ದೇಶದಲ್ಲಿ 6ನೇ ಸ್ಥಾನದಲ್ಲಿದೆ. ಬಡತನ ಮುಕ್ತ, ಹಸಿವು ಮುಕ್ತ, ಲಿಂಗ ಸಮಾನತೆ, ಕೈಗಾರಿಕೆ, ನಾವೀನ್ಯತೆ ಮತ್ತು ಮೂಲಸೌಕರ್ಯ ಹಾಗೂ ಸುಸ್ಥಿರ ನಗರಗಳು ಮತ್ತು ಸಮುದಾಯಗಳು ಈ ಆರು ಗುರಿಗಳಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸಬೇಕಿದೆ. ಈ ಗುರಿಗಳ ಪೈಕಿ ವಿಷಯವಾರು ತಜ್ಞರ ಅಧ್ಯಯನ ಮತ್ತು ಸಲಹೆಗಳನ್ನು ಆಧರಿಸಿ ವರದಿ ನೀಡಲು ರಾಜ್ಯ ಯೋಜನಾ ಮಂಡಳಿ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ರಾಜ್ಯಯೋಜನಾ ಮಂಡಳಿಯ ಉಪಾಧ್ಯಕ್ಷ ಬಿ.ಜೆ.ಪುಟ್ಟಸ್ವಾಮಿ ಮಾತನಾಡಿ, ಗುಜರಾತ್ ಮಾದರಿಯಲ್ಲಿ ಯೋಜನೆಗಳನ್ನು ರೂಪಿಸಲು ಮುಂದಾಗಿರುವುದಾಗಿ ತಿಳಿಸಿದರು.

### ಸಭೆಯ ಪ್ರಮುಖ ತೀರ್ಮಾನಗಳು

- ರಾಜ್ಯ ಯೋಜನಾ ಮಂಡಳಿಯನ್ನು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನೆ ಆಯೋಗವೆಂದು ಮರುನಾಮಕರಣ
- 5 ತಾಂತ್ರಿಕ ವಿಭಾಗಗಳಿಗೆ ಅನುಮೋದನೆ, ಹೆಚ್ಚುವರಿಯಾಗಿ 3 ಸಂಶೋಧನಾ ಅಧಿಕಾರಿ ಹುದ್ದೆಗಳ ಮಂಜೂರಾತಿ
- ರಾಜ್ಯದ ಸಮಗ್ರ ಮಾಹಿತಿ ಒದಗಿಸುವ ಸಿಎಂ ಡ್ಯಾಶ್ ಬೋರ್ಡ್ ಅಭಿವೃದ್ಧಿ
- ಪ್ರಾದೇಶಿಕ ಸಮತೋಲನೆಗಾಗಿ ಸರಾಸರಿಗಿಂತ ಕಡಿಮೆ ಇರುವ 114 ತಾಲೂಕುಗಳಿಗೆ ಹೆಚ್ಚಿನ ಒತ್ತು
- ಬಡವರಿಗೆ ಸೌಲಭ್ಯಗಳನ್ನು ಒದಗಿಸಲು ಏಕಗವಾಕ್ಷಿ ವ್ಯವಸ್ಥೆ
- ಜಿಲ್ಲಾ ಯೋಜನಾ ಸಮಿತಿಗಳನ್ನು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನೆ ಆಯೋಗದೊಂದಿಗೆ ಸಮೀಕರಣ
- ಗ್ರಾಮ ಮಟ್ಟದಲ್ಲಿ ಗ್ರಾಮ ಅಭಿವೃದ್ಧಿ ಯೋಜನೆ
- ಆದಿವಾಸಿ ಬುಡಕಟ್ಟು ಜನಾಂಗದ ಅಭಿವೃದ್ಧಿ ಯೋಜನೆಗೆ 600 ಕೋಟಿ ರೂ.ಗಳ ಅನುದಾನ
- 2021-22ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆಯಲ್ಲಿ ಯೋಜನೆಗಳ ಸಮೀಕರಣ
- ಎಂಎಸ್ಎಂಇ ಪುನಶ್ಚೇತನಗೊಳಿಸಲು ಐಸೆಕ್ ವತಿಯಿಂದ ವರದಿ
- ಕರಾವಳಿ ಜಿಲ್ಲೆಗಳ ಅಭಿವೃದ್ಧಿಗಾಗಿ ಸಮಗ್ರ ಯೋಜನೆ ರೂಪಿಸಿ ಮತ್ಸ್ಯಸಂಪದ ಯೋಜನೆಯಡಿ ಆತ್ಮನಿರ್ಭರ ಯೋಜನೆಯು ಅನುದಾನ ಪಡೆಯುವುದು
- ರಾಜ್ಯದ ಎಲ್ಲಾ ವಿವಿಗಳಲ್ಲಿ ಮತ್ತು ಕಾಲೇಜುಗಳಲ್ಲಿ ಎಸ್‌ಡಿಸಿ ಔಟ್‌ರೀಚ್ ಕೇಂದ್ರ ಸ್ಥಾಪನೆ. 7ನೇ ಪುಟಕ್ಕೆ

ರಾಜ್ಯದಲ್ಲಿ 1800 ಯೋಜನೆಗಳಿವೆ. ಅವುಗಳಲ್ಲಿ 300 ಕ್ಕೂ ಹೆಚ್ಚು ಯೋಜನೆಗಳಿಗೆ 1 ಕೋಟಿ ರೂ.ಗೂ ಕಡಿಮೆ ಬಜೆಟ್ ಇದೆ. ಅಂತಹ ಯೋಜನೆಗಳನ್ನು ಬೇರೆ ಯೋಜನೆಗಳ ಜೊತೆ ವಿಲೀನ ಮಾಡಲಾಗುವುದು. ಆತ್ಮ ನಿರ್ಭರ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

• ಡಾ. ಶಾಲಿನಿ ರಜನೀಶ್, ಯೋಜನಾ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ

# ಸುಸ್ಥಿರ ಅಭಿವೃದ್ಧಿಗೆ 17 ಸೂತ್ರಗಳು!

1ನೇ ಪುಟದಿಂದ ▸

- ಬೆಂಗಳೂರಿನಲ್ಲಿ ಪಿಪಿಪಿ ಮಾದರಿಯಲ್ಲಿ ಕರ್ನಾಟಕ ವಿಜ್ಞಾನ ನಗರ ಸ್ಥಾಪನೆ
- ಆಯವ್ಯಯದಲ್ಲಿ ಯೋಜನೆಗಳಿಗೆ ನಿಗದಿಪಡಿಸಿದ ಒಟ್ಟು ಅನುದಾನದಲ್ಲಿ ಶೇ.1ರಷ್ಟು ಕರ್ನಾಟಕ ಇನ್ನೋವೇಷನ್ ಕಾರ್ಯಕ್ರಮಗಳಿಗೆ ಮೀಸಲು
- 100ಕೋಟಿ ರೂ. ಹಾಗೂ ಅಧಿಕ ಅನುದಾನ ಪಡೆದ ಎಲ್ಲಾ ಯೋಜನೆಗಳನ್ನು ಕಡ್ಡಾಯವಾಗಿ ಮೌಲ್ಯಮಾಪನಕ್ಕೆ ಒಳಪಡಿಸುವುದು.
- 118 ಕೇಂದ್ರ ಪುರಸ್ಕೃತ ಯೋಜನೆಗಳಲ್ಲಿ ಒಂದೇ ರೀತಿಯ ಉದ್ದೇಶಗಳು ಇದ್ದರೆ ರಾಜ್ಯದ ಯೋಜನೆ ಸಮೀಕರಿಸುವುದು.
- ಒಂದು ಕೋಟಿಗಿಂತ ಕಡಿಮೆ ಇರುವ ಎಲ್ಲಾ ಯೋಜನೆಗಳನ್ನು ದೊಡ್ಡ ಯೋಜನೆಗಳೊಂದಿಗೆ ವಿಲೀನಗೊಳಿಸುವುದು.
- ಕೃಷಿ ಉತ್ಪಾದಕತೆಯಲ್ಲಿ ಹೆಚ್ಚಳವನ್ನು ಸಾಧಿಸಲು ರಾಜ್ಯ ವಲಯದ ಯೋಜನೆಗಳನ್ನು ಕೇಂದ್ರ ವಲಯ ಯೋಜನೆಗಳೊಂದಿಗೆ ವಿಲೀನಗೊಳಿಸಲಾಗುವುದು.
- ಕೇಂದ್ರ ಸರ್ಕಾರದ ಮಾದರಿಯಂತೆ ರಾಜ್ಯದ 1745 ಯೋಜನೆಗಳನ್ನು ಅಂಬ್ರೆಲಾ ಯೋಜನೆಗಳಿಗೆ ಸಮೀಕರಣ
- ಕೇಂದ್ರ ಪುರಸ್ಕೃತ ಯೋಜನೆಗಳ ಪಾಲನ್ನು ಶೇ.8ಕ್ಕಿಂತ ಹೆಚ್ಚಿಸಲು ಕ್ರಮ
- ವನ ತೋಟಗಾರಿಕೆ ಯೋಜನೆಗೆ ಆದ್ಯತೆ
- ಕೇಂದ್ರ ಸರ್ಕಾರದ ಕೌಶಲ್ಯಯೋಜನೆಯಡಿ 6,090 ಕೋಟಿ ಕೋ.ಗಳನ್ನು ಪಡೆದು, 14 ಲಕ್ಷ ಯುವಕ ಯುವತಿಯರಿಗೆ ಎಫ್‌ಕೆಸಿಸಿಐ ಹಾಗೂ ಕಾಸಿಯಾ ಮೂಲಕ ಕೌಶಲ್ಯತೆ ತರಬೇತಿ ಮತ್ತು ನೇಮಕಾತಿ ನೀಡಲು ಯೋಜನೆ
- ಪಿಪಿಪಿ ಮಾದರಿಯಲ್ಲಿ ರಾಜ್ಯಕ್ಕೆ ಒಂದು ಕೌಶಲ್ಯ ವಿಶ್ವವಿದ್ಯಾಲಯವನ್ನು ಸ್ಥಾಪನೆ
- ಪ್ರತಿ ಗ್ರಾಮ ಪಂಚಾಯತಿಯಲ್ಲಿ ಒಂದರಿಂದ ಹತ್ತನೇ ತರಗತಿಯವರೆಗೆ ಒಂದು ಸ್ಮಾರ್ಟ್ ಶಾಲೆ
- ಮುಂಬೈ ಹಾಗು ದೆಹಲಿ ಮಾದರಿಯಲ್ಲಿ ಬೆಂಗಳೂರು ಮಾನವ ಅಭಿವೃದ್ಧಿ ವರದಿ ಸಿದ್ಧಪಡಿಸುವುದು.
- ಸ್ಮಾರ್ಟ್ ಸಿಟಿ ರೀತಿಯಲ್ಲಿ ಅಂತರ್ ಜಲ ಹೆಚ್ಚಳಕ್ಕೆ ಸ್ಪಾಂಜ್ ಸಿಟಿ ಪರಿಕಲ್ಪನೆ ಬೆಳೆಸುವುದು.
- ನೀರಾವರಿ ಆಯೋಗ ಸ್ಥಾಪಿಸುವುದು.